**ಸಾಕ್ಷಿಗೆ ದಿಃ 12.08.2026 ರಂದು ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ ಪಿರ್ಯಾದುದಾರರ ಪರ ಶ್ರೀ ಜೆ ಪಿ ಬಿ ವಕೀಲರಿಂದಃ**

ನಾನು ನ್ಯಾಯಾಲಯದ ಮುಂದೆ ಹಾಜರುಪಡಿಸಿದ ಪ್ರಮಾಣ ಪತ್ರದಲ್ಲಿ ಹೇಳಿರುವ ಎಲ್ಲಾ ಮಾಹಿತಿಗಳು ಸತ್ಯವಾಗಿದ್ದು ಅದರಲ್ಲಿರುವ ಸಹಿ ನನ್ನದು ಇರುತ್ತದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಚೆಕ್, ಬ್ಯಾಂಕ್ ಮೆಮೋ, ಲೀಗಲ್ ನೋಟೀಸ್, ಅಂಚೆ ರಶೀದಿ, ಅಂಚೆ ಸ್ವೀಕೃತಿಗಳನ್ನು ಹಾಜರು ಮಾಡಿ ನಿಪಿ–1, 1(ಎ), 2, 3, 3(ಎ),(ಬಿ) ಎಂದು ಗುರುತಿಸಲಾಗಿದ್ದು ಅವುಗಳನ್ನು ಸಾಕ್ಷಿ ನೋಡಿ ತನ್ನ ಸಾಕ್ಷ್ಯದಲ್ಲಿ ಅಳವಡಿಸಿಕೊಂಡು ಮುಂದುವರೆದು ಅಧಿಕಾರ ಪತ್ರದ ದೃಢೀಕೃತ ಪ್ರತಿಯನ್ನು ನಿಪಿ–4 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿ ಆಲಿಸಿ ನೀಡಲಾಯಿತು).

ನ್ಯಾಯಾಲಯದ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು & ಜೆ.ಎಂ.ಎಫ್.ಸಿ.,
ಮೂಡಬಿದ್ರೆ